# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿಜಯನಗರ ಜಿಲ್ಲೆಗೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಛೇರಿ ಮತ್ತು ಹುದ್ದೆಗಳನ್ನು ಸೃಜಿಸುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ/4/ಎಲ್.ಆರ್.ಡಿ/2019, ದಿನಾಂಕ:08.02.2021.

2. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ವಿಹಿನಿ/ಸಿಬ್ಬಂದಿ/ಸಿ1/40/2022-23/1705, ದಿನಾಂಕ:23.09.2022.

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಅಧಿಸೂಚನೆಯಲ್ಲಿ ಬಳ್ಳಾರಿ ಜಿಲ್ಲೆಯ ಸರಹದ್ದುಗಳನ್ನು ಮಾರ್ಪಡಿಸಿ ವಿಜಯನಗರ ಜಿಲ್ಲೆ ಎಂಬ ಹೆಸರಿನ ನೂತನ ಜಿಲ್ಲೆಯನ್ನು ರಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ದಿನಾಂಕ:08.02.2021ರ ಕಂದಾಯ ಇಲಾಖೆಯ ಅಧಿಸೂಚನೆಯಲ್ಲಿ ಬಳ್ಳಾರಿ ಜಿಲ್ಲೆಯನ್ನು ವಿಭಜಿಸಿ, ಹೊಸಪೇಟೆ ಕೇಂದ್ರಸ್ಥಾನವನ್ನಾಗಿಸಿ, ನೂತನ ವಿಜಯನಗರ ಜಿಲ್ಲೆಯನ್ನು ರಚಿಸಿ ಅಂತಿಮ ಅಧಿಸೂಚನೆಯನ್ನು ಹೊರಡಿಸಲಾಗಿದೆ. ಪ್ರಸ್ತುತ ಇರುವ ಜಿಲ್ಲಾ ಕೇಂದ್ರಗಳಲ್ಲಿ ಒಂದರಂತೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಗೆ ಸಂಬಂಧಿಸಿದ ಯೋಜನೆಗಳನ್ನು ಅನುಷ್ಠಾನಗೊಳಿಸಲು ತಲಾ ಒಂದೊಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ ಹಾಗೂ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ, ಯೋಜನಾ ಸಹಾಯಕರ, ಬೆರಳಚ್ಚುಗಾರರ ಮತ್ತು ಗ್ರೂಪ್-ಡಿ ವೃಂದದ ತಲಾ ಒಂದೊಂದು ಹುದ್ದೆಗಳನ್ನು ಸೃಜನೆ ಮಾಡಲಾಗಿರುತ್ತದೆ.

ಪ್ರಸ್ತುತ ಹೊಸದಾಗಿ ಸೃಜನೆಯಾಗಿರುವ ವಿಜಯನಗರ ಜಿಲ್ಲೆಯಲ್ಲಿ ಇಲಾಖೆಯ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರಿಗೆ ಸಕಾಲದಲ್ಲಿ ತಲುಪಿಸಲು ವಿಜಯನಗರ ಜಿಲ್ಲೆಗೆ 01 ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿಯನ್ನು ಹೊಸದಾಗಿ ಸೃಜಿಸಿ, ಕಛೇರಿಯ ನಿರ್ವಹಣೆಗೆ ಈ ಕೆಳಕಂಡ ಅಧಿಕಾರಿ/ಸಿಬ್ಬಂದಿಗಳ ಹುದ್ದೆಗಳನ್ನು ಸೃಜಿಸಿ ಆಡಳಿತಾತ್ಮಕ ಮಂಜೂರಾತಿಯನ್ನು ಹೊರಡಿಸಿ, ಲೆಕ್ಕ ಶೀರ್ಷಿಕೆ:2235-02-101-0-99 ಉದ್ದೇಶಿತ ಲೆಕ್ಕ ಶೀರ್ಷಿಕೆಗಳಡಿ ವೇತನ ಹಾಗೂ ಭತ್ಯೆಗಳಿಗೆ ಅಗತ್ಯ ಅನುದಾನವನ್ನು ಒದಗಿಸಲು ಕೋರಿರುತ್ತಾರೆ.

| ಕ್ರ. ಸಂ | ಜಿಲ್ಲೆಯ ಹೆಸರು | ಹುದ್ದೆಯ ಪದನಾಮ | ವೃಂದ | ಸೃಜಿಸಬೇಕಾದ ಹುದ್ದೆಗಳ ಸಂಖ್ಯೆ | ವೇತನ ಶ್ರೇಣಿ (ರೂ.ಗಳಲ್ಲಿ) |
|---|---|---|---|---|---|
| 1 | ವಿಜಯನಗರ ಜಿಲ್ಲೆ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ | ಬಿ | 01 | 43100-83900 |
| 2 | | ಯೋಜನಾ ಸಹಾಯಕರು | ಸಿ | 01 | 27600-52650 |
| 3 | | ಬೆರಳಚ್ಚುಗಾರರು | ಸಿ | 01 | 21400-42000 |
| 4 | | ಗ್ರೂಪ್-ಡಿ | ಡಿ | 01 | 17000-28950 |
| | | | ಒಟ್ಟು | 04 | |

.........2

6/10/23

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಹೊಸದಾಗಿ ರಚನೆಯಾದ ವಿಜಯನಗರ ಜಿಲ್ಲೆಯಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಕಛೇರಿಯನ್ನು ಪ್ರಾರಂಭಿಸಲು ವಿವಿಧ ವೃಂದದ ಹುದ್ದೆಗಳನ್ನು ಸೃಜಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಮಮಇ 466 ಎಸ್.ಜೆ.ಡಿ 2022,**
**ದಿನಾಂಕ:11.09.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹೊಸದಾಗಿ ರಚನೆಯಾದ ವಿಜಯನಗರ ಜಿಲ್ಲೆಯಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಕಛೇರಿಯನ್ನು ಪ್ರಾರಂಭಿಸಲು ಈ ಕೆಳಕಂಡ 04 ಹುದ್ದೆಗಳನ್ನು ಸೃಜಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

| ಕ್ರ. ಸಂ. | ಹುದ್ದೆಯ ಪದನಾಮ | ಹುದ್ದೆಗಳ ಸಂಖ್ಯೆ | ನೇಮಕಾತಿ ವಿಧಾನ |
|---|---|---|---|
| 1 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ | 01 | ವೃಂದ ಮತ್ತು ನೇಮಕಾತಿ ನಿಯಮಗಳನ್ವಯ |
| 2 | ಯೋಜನಾ ಸಹಾಯಕರು | 01 | |
| 3 | ಬೆರಳಚ್ಚುಗಾರರು / DEO | 01 | ಹೊರಗುತ್ತಿಗೆ |
| 4 | ಗ್ರೂಪ್-ಡಿ | 01 | |
| | **ಒಟ್ಟು** | **04** | |

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/244/ವೆಚ್ಚ-10/2023, ದಿನಾಂಕ:08.08.2023 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

G.H. Saroja 11/09/2023
**(ಜಿ.ಹೆಚ್. ಸರೋಜ ಮ್ಮ)**
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್‌ಎಸ್‌ಎ)/ (ಇ ಆರ್ ಎಸ್ ಎ) ಮತ್ತು (ಎ & ಇ), ಕರ್ನಾಟಕ, ಬೆಂಗಳೂರು-560 001.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ. ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
4. ಜಿಲ್ಲಾಧಿಕಾರಿಗಳು, ವಿಜಯನಗರ ಜಿಲ್ಲೆ.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ವಿಜಯನಗರ ಜಿಲ್ಲೆ.
6. ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಜಯನಗರ ಜಿಲ್ಲೆ.
7. ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ವಿಜಯನಗರ ಜಿಲ್ಲೆ.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 2 & 10), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.
10. ಸರ್ಕಾರದ ಜಂಟಿ ಕಾರ್ಯದರ್ಶಿರವರ ಆಪ್ತ ಸಹಾಯಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.